ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ವಿಷಯ: ದಾವಣಗೆರೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿದ್ದ ಹರಪನಹಳ್ಳಿ ತಾಲ್ಲೂಕ ಪಂಚಾಯಿತಿಯನ್ನು ಬಳ್ಳಾರಿ ಜಿಲ್ಲಾ ಪಂಚಾಯಿತಿಗೆ ಸೇರ್ಪಡೆಗೊಳಿಸುವ ಬಗ್ಗೆ.

**ಅಧಿಸೂಚನೆ;**

**ಸಂಖ್ಯೆ: ಗ್ರಾಅಪ 482 ಜಿಪಸ 2018 ಬೆಂಗಳೂರು, ದಿನಾಂಕ:05-01-2019**

ಸರ್ಕಾರವು, ಅಧಿಸೂಚನೆ ಸಂಖ್ಯೆ: ಆರ್‌ಡಿ 139 ಭೂದಪು 2013 ದಿನಾಂಕ:24-12-2018 ರಂದು ದಾವಣಗೆರೆ ಜಿಲ್ಲೆಯಲ್ಲಿದ್ದ ಹರಪನಹಳ್ಳಿ ತಾಲ್ಲೂಕನ್ನು ಬೇರ್ಪಡಿಸಿ ಬಳ್ಳಾರಿ ಜಿಲ್ಲೆಗೆ ಸೇರಿಸಿ ಅಧಿಸೂಚನೆಯನ್ನು ಹೊರಡಿಸಿದೆ. ಈ ಹಿನ್ನೆಲೆಯಲ್ಲಿ, ಪ್ರಸ್ತುತ ದಾವಣಗೆರೆ ಜಿಲ್ಲಾ ಪಂಚಾಯಿತಿಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಹರಪನಹಳ್ಳಿ ತಾಲ್ಲೂಕು ಪಂಚಾಯಿತಿಯನ್ನು ಸದರಿ ಜಿಲ್ಲಾ ಪಂಚಾಯಿತಿಯಿಂದ ಬೇರ್ಪಡಿಸಿ, ಬಳ್ಳಾರಿ ಜಿಲ್ಲಾ ಪಂಚಾಯಿತಿಯ ವ್ಯಾಪ್ತಿಗೆ ಸೇರಿಸಿದೆ. ಹರಪನಹಳ್ಳಿ ತಾಲ್ಲೂಕು ಪಂಚಾಯಿತಿಗೆ ಸಂಬಂಧಿಸಿದ ಎಲ್ಲಾ ಕಾರ್ಯ ವ್ಯವಹಾರಗಳನ್ನು ಇನ್ನು ಮುಂದೆ ಬಳ್ಳಾರಿ ಜಿಲ್ಲಾ ಪಂಚಾಯಿತಿನಿಂದ ವ್ಯವಹರಿಸುವಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣ 302 (ಬಿ) ರನ್ವಯ ಆದೇಶಿಸಿದೆ.

ಮುಂದುವರೆದು, ಹರಪನಹಳ್ಳಿ ತಾಲ್ಲೂಕು ಪಂಚಾಯತ್ ಸದಸ್ಯರು ಮತ್ತು ಹರಪನಹಳ್ಳಿ ತಾಲ್ಲೂಕು ಪಂಚಾಯತ್ ವ್ಯಾಪ್ತಿಗೆ ಒಳಪಡುವ ಜಿಲ್ಲಾ ಪಂಚಾಯತ್ ಕ್ಷೇತ್ರವನ್ನು ಪ್ರತಿನಿಧಿಸುವ ಈ ಕೆಳಕಂಡ ದಾವಣಗೆರೆ ಜಿಲ್ಲಾ ಪಂಚಾಯತ್ ಸದಸ್ಯರ ಸ್ಥಾನವು ಬಳ್ಳಾರಿ ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಒಳಪಡುತ್ತದೆ ಎಂದು ಆದೇಶಿಸಿದೆ.

| ಕ್ರ.ಸಂ. | ಸದಸ್ಯರ ಹೆಸರು | ಕ್ಷೇತ್ರ |
|---|---|---|
| 1 | ಶ್ರೀಮತಿ ಜಯಶೀಲ ಕೆ.ಆರ್. | ತೆಲಿಗಿ ಜಿ.ಪಂ.ಕ್ಷೇತ್ರ |
| 2 | ಶ್ರೀಮತಿ ರಶ್ಮಿ ಜಿ. | ಉಚ್ಚಂಗಿದುರ್ಗ ಜಿ.ಪಂ.ಕ್ಷೇತ್ರ |
| 3 | ಶ್ರೀಮತಿ ವೈ.ಸುಶೀಲಮ್ಮ ದೇವೇಂದ್ರಪ್ಪ. | ಅರಸೀಕೆರೆ ಜಿ.ಪಂ.ಕ್ಷೇತ್ರ |
| 4 | ಶ್ರೀ ಮಂಜುನಾಥ ಉತ್ತಂಗಿ. | ಚಿಗಟೇರಿ ಜಿ.ಪಂ.ಕ್ಷೇತ್ರ |
| 5 | ಶ್ರೀ ಹೆಚ್.ಬಿ.ಪರಶುರಾಮ್. | ನೀಲಗುಂದ ಜಿ.ಪಂ.ಕ್ಷೇತ್ರ |
| 6 | ಶ್ರೀ ಡಿ.ಸಿದ್ದಪ್ಪ | ಕಂಚಿಕೆರೆ ಜಿ.ಪಂ.ಕ್ಷೇತ್ರ |
| 7 | ಶ್ರೀಮತಿ ಆರುಂಡಿ ಸುವರ್ಣ ನಾಗರಾಜ್. | ಹಲವಾಗಲು ಜಿ.ಪಂ.ಕ್ಷೇತ್ರ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.

**ಪ್ರತಿಗಳು:**

1. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಮತ್ತು ಕಲಬುರಗಿ

2. ಜಿಲ್ಲಾಧಿಕಾರಿ, ದಾವಣಗೆರೆ ಮತ್ತು ಬಳ್ಳಾರಿ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಮತ್ತು ಬಳ್ಳಾರಿ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಮುಖಾಂತರ ಸಂಬಂಧಪಟ್ಟ ಅನುಷ್ಠಾನ ಇಲಾಖಾಧಿಕಾರಿಗಳಿಗೆ.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರ ಮುಖಾಂತರ ಸಂಬಂಧಪಟ್ಟ ಅನುಷ್ಠಾನ ಇಲಾಖಾಧಿಕಾರಿಗಳಿಗೆ.
6. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ ಇವರ ಮಾಹಿತಿಗಾಗಿ ಹಾಗೂ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರುವಂತೆ ಕೋರಿದೆ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಮುಖ್ಯಸ್ಥರು, ಗಣಕಕೋಶ, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಸದರಿ ಅಧಿಸೂಚನೆಯ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
9. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.